PW-1

ದಿನಾಂಕಃ18-10-2022 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು, ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀಸವಾಲುಃ 1 ನೇ ಪ್ರತಿವಾದಿಪರ ಶ್ರೀ ಜಿ ಎಸ್ ಆರ್ ವಕೀಲರಿಂದ.

ದಾವಾ ಸ್ವತ್ತುಗಳ ಸರ್ವೆ ನಂ.87 ಮತ್ತು 60. ಸರ್ವೆ ನಂ.87 ರಲ್ಲಿ ಒಟ್ಟು 2 ಎಕರೆ ಜಮೀನು ಇದೆ. ಸರ್ವೆ ನಂ.87 ಮೂಲತಃ ನನ್ನ ತಾಯಿಯ ಹೆಸರಿನಲ್ಲಿತ್ತು. ಸರ್ವೆ ನಂ.87 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ. ಸರ್ವೆ ನಂ.60 ರಲ್ಲಿ ಮೂಲತಃ 12 ಎಕೆರ ಜಮೀನು ನನ್ನ ತಾಯಿಯ ಹೆಸರಿನಲ್ಲಿತ್ತು. ನಿಪಿ.3 ದಾಖಲೆಯ ಪ್ರಕಾರ ಸರ್ವೆ ನಂ.60/3 ರಲ್ಲಿ  ಒಟ್ಟು 2 ಎಕರೆ ಜಮೀನು ಇದೆ ಎಂದರೆ ಸರಿ. ಸರ್ವೆ ನಂ.60/3 ರಲ್ಲಿ 8 ಗುಂಟೆ ಜಮೀನನ್ನು 1 ನೇ ಪ್ರತಿವಾದಿಯು ಖರೀದಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.  ಸರ್ವೆ ನಂ.87 ರಲ್ಲಿ ಜಮೀನಿನಲ್ಲಿ 1997 ರಲ್ಲಿ 1 ನೇ ಪ್ರತಿವಾದಿಯು 1 ಎಕರೆ 32 ಗುಂಟೆ ಜಮೀನನ್ನು ಖರೀದಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಿಪಿ.3 ದಾಖಲೆಯಲ್ಲಿ ನಮೂದಿಸಿರುವ ವ್ಯಕ್ತಿಗಳು ಸದರಿ ಸರ್ವೆ ನಂಬರ್ ನ ಜಮೀನಿನಲ್ಲಿ ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ಇರಬಹುದು. ನಿಪಿ.3 ರಲ್ಲಿ ಇರುವ ವ್ಯಕ್ತಿಗಳನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ.  ನಿಪಿ.7 ದಾಖಲೆಯಡಿ ಖಾತೆಯನ್ನು ಮಾಡಿಸಲು ನಾನು ಎರಡುಮೂರು ಬಾರಿ ನೋಟೀಸನ್ನು ನೀಡಿದ್ದೇನು. ದಾವಾ ಸ್ವತ್ತುಗಳು ನನ್ನ ತಂದೆ ಮತ್ತು ತಾಯಿಗೆ ಯಾವ ರೀತಿ ಬಂದವು ಎಂದು ನಾನು ವಾದ ಪತ್ರದಲ್ಲಿ ತಿಳಿಸಿರುತ್ತೇನೆ. 1 ನೇ ಪ್ರತಿವಾದಿಯು ದಾವಾ ಸ್ವತ್ತುಗಳನ್ನು ಖರೀದಿ ಮಾಡಿದಾಗಿನಿಂದ ಅವುಗಳ ಸ್ವಾಧಿನಾನುಭವದಲ್ಲಿ ಇದ್ದಾರೆ ಎಂದರೆ ಸರಿ . ದಾವಾ ಸ್ವತ್ತುಗಳ ಪಹಣಿ ಪತ್ರಿಕೆಗಳು ನನ್ನ ತಂದೆ ತಾಯಿ ಹೆಸರಿನಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ.  ನನ್ನ ತಂದೆ ತಾಯಿ ಹೆಸರಿನಲ್ಲಿರುವ ಕಂದಾಯ ದಾಖಲೆಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ.10 ರಲ್ಲಿರುವ ಸರ್ವೆ ನಂಬರ್ ಗಳ ಪಹಣಿ ಪತ್ರಿಕೆಗಳು ಪ್ರತಿವಾದಿ 2 ಮತ್ತು 3 ರವರ ಹೆಸರಿನಲ್ಲಿ ದಾಖಲಾಗಿವೆ ಎಂದರೆ  ಸರಿ . 2 ಮತ್ತು 3 ನೇ ಪ್ರತಿವಾದಿಗಳು ತಮ್ಮ ಹೆಸರಿನಲ್ಲಿ ಕಂದಾಯ ದಾಖಲೆಗಳು ಇದ್ದ ಕಾರಣ ಅವರುಗಳು ದಾವಾ ಸ್ವತ್ತುಗಳನ್ನು 1 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. 2 ಮತ್ತು 3 ನೇ ಪ್ರತಿವಾದಿಗಳು 1 ನೇ ಪ್ರತಿವಾದಿಗೆ ಸರ್ವೆ ನಂ.87/ಪಿ ನಲ್ಲಿ 2 ಎಕರೆ 28 ½ ಗುಂಟೆ ಜಮೀನಿನ ಪೈಕಿ 1 ಎಕರೆ 32 ಗುಂಟೆ ಜಮೀನನ್ನು ಮಾರಾಟ ಮಾಡಿರುವ ವಿಚಾರ ನನಗೆ

ಗೊತ್ತಿಲ್ಲ. ಸರ್ವೆ ನಂ.60/ಪಿ ರಲ್ಲಿ 13 ½ ಗುಂಟೆ ಪೈಕಿ 8 ಗುಂಟೆ ಜಮೀನನ್ನು 1 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನಿಪಿ.7 ದಾಖಲೆಯನ್ನು ಬರೆದುಕೊಡಲು ನನ್ನ ತಂದೆ ತಾಯಿಗೆ ಯಾವುದೇ ರೀತಿಯ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ನಾನು ನಿಪಿ.7 ದಾಖಲೆಯನ್ನು ಸೃಷ್ಟಿ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀಸವಾಲನ್ನು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಿ/ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.